# ಕರ್ನಾಟಕ ಸರ್ಕಾರ

## ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1

**ಸಂಖ್ಯೆ ಎಡಿಎಂ2(1) ಶೈ.ವ.ನಿ-01/2021-22** **ದಿನಾಂಕ: 29.10.2021**

**ಸುತ್ತೋಲೆ**

ವಿಷಯ:-ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ 2021-22 ನೇ ಸಾಲಿನ ಸಮುದಾಯದತ್ತ ಶಾಲೆ ಕಾರ್ಯಕ್ರಮ ಆಯೋಜಿಸುವ ಕುರಿತು.

ಉಲ್ಲೇಖ:-ಈ ಕಚೇರಿಯ ಇದೇ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ:10.06.2021 ಮತ್ತು ಅದರೊಂದಿಗಿನ ಅನುಬಂಧ-01 ರಂತೆ.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಶಾಲೆಗಳಲ್ಲಿ ದಿನಾಂಕ:30-10-2021 ಮತ್ತು 31-10-2021 ಗಳಂದು ಕ್ರಮವಾಗಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ವಿಭಾಗದ ಮೊದಲನೆಯ ಸಮುದಾಯದತ್ತ ಶಾಲೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ಉಲ್ಲೇಖಿತ ಸುತ್ತೋಲೆ ಮತ್ತು ಅದರೊಂದಿಗಿನ ಅನುಬಂಧ-01 ರಲ್ಲಿ ತಿಳಿಸಲಾಗಿತ್ತು.

ಕೋವಿಡ್-19 ರ ಹಿನ್ನಲೆಯಲ್ಲಿ ರಾಜ್ಯದಲ್ಲಿ ಶಾಲೆಗಳಲ್ಲಿನ ಭೌತಿಕ ತರಗತಿಗಳು ಪ್ರಸಕ್ತ ಸಾಲಿನಲ್ಲಿ ನಿಗದಿತ ಅವಧಿಯಲ್ಲಿ ಪ್ರಾರಂಭವಾಗದಿರುವುದರಿಂದ ಮತ್ತು ಇತ್ತೀಚಿಗೆ ಶಾಲೆಗಳಲ್ಲಿ ಪೂರ್ಣಪ್ರಮಾಣದಲ್ಲಿ ಬೋಧನಾ ಕಲಿಕಾ ಪ್ರಕ್ರಿಯೆ ಪ್ರಾರಂಭಿಸಿರುವುದರಿಂದ ದಿನಾಂಕ:30-10-2021 ಮತ್ತು 31-10-2021 ಗಳಂದು ಕ್ರಮವಾಗಿ ಪ್ರಾಥಮಿಕ ಮತ್ತು ಪ್ರೌಢ ವಿಭಾಗದ ಮೊದಲನೆಯ ಸಮುದಾಯದತ್ತ ಶಾಲೆ ಕಾರ್ಯಕ್ರಮವನ್ನು ಹಮ್ಮಿಕೊಂಡಲ್ಲಿ ವಿದ್ಯಾರ್ಥಿಗಳ ಕಲಿಕಾ ಪ್ರಗತಿಯ ಕುರಿತು ವಿಶ್ಲೇಷಣೆಯನ್ನು ಸಮರ್ಪಕವಾಗಿ ಮಾಡುವುದು ಸಾಧ್ಯವಾಗದೇ ಇರುವುದರಿಂದ, ಸದರಿ ಕಾರ್ಯಕ್ರಮವನ್ನು ಮುಂದೂಡಿ, **ದಿನಾಂಕ: 22-12-2021 ಮತ್ತು 23-12-2021 ಗಳಂದು ಕ್ರಮವಾಗಿ ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮೊದಲನೆಯ ಸಮುದಾಯದತ್ತ ಶಾಲೆ ಕಾರ್ಯಕ್ರಮವನ್ನು ಹಮ್ಮಿಕೊಂಡು ಯಶಸ್ವಿಗೊಳಿಸಲು ಈ ಮೂಲಕ ತಿಳಿಸಲಾಗಿದೆ.** ಉಳಿದ ಅಂಶಗಳು ಯಥಾವತ್ತಾಗಿ ಮುಂದುವರೆಯುತ್ತದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.

ಇವರಿಗೆ:-

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಮತ್ತು ಉಪನಿರ್ದೇಶಕರು (ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಆಯಾ ಉಪನಿರ್ದೇಶಕರು (ಆಡಳಿತ) ರವರ ಮೂಲಕ ಮುಂದಿನ ಕ್ರಮಕ್ಕಾಗಿ.
3. ಹಿರಿಯ ಸಹಾಯಕ ನಿರ್ದೇಶಕರು(ಇ-ಆಡಳಿತ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಇಲಾಖಾ ಅಂತರ್ಜಾಲ ತಾಣದಲ್ಲಿ ಅಳವಡಿಸುವಂತೆ ತಿಳಿಸಿದೆ.
4. ರಾಜ್ಯ ಎಲ್ಲಾ ಶಾಲಾ ಮುಖ್ಯಸ್ಥರಿಗೆ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ.

ಪ್ರತಿಯನ್ನು:

01. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, 6 ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
02. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ಕೋರಿದೆ.
03. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
04. ರಾಜ್ಯ ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ರವರಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ.
05. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
06. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ
07. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ., 80 ಅಡಿ ಹೊರ ವರ್ತುಲ ರಸ್ತೆ, ಬನಶಂಕರಿ, ಬೆಂಗಳೂರು
08. ವ್ಯವಸ್ಥಾಪಕ ನಿರ್ದೇಶಕರು, ಕ.ಪ.ಪು.ಸಂಘ(ನೋಂ), ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ.
09. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕಕರುಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ.
10. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.
11. ಸಹ ನಿರ್ದೇಶಕರು ಮಧ್ಯಾಹ್ನ ಉಪಹಾರ ಯೋಜನೆ ಬೆಂಗಳೂರು ರವರಿಗೆ. ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
12. ಕಛೇರಿ ಪ್ರತಿ